ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 784

ಸದಸ್ಯರ ಹೆಸರು : ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ. | ನೂತನವಾಗಿ ನಿರ್ಮಿಸಿರುವ ಹುಣಸೂರು ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದಲ್ಲಿ ವಿದ್ಯುತ್ ದೀಪಗಳಿಲ್ಲದೆ, ರಾತ್ರಿವೇಳೆ ಸಾರ್ವಜನಿಕರಿಗೆ, ಪ್ರಯಾಣಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹುಣಸೂರು ಬಸ್ ನಿಲ್ದಾಣದ ಒಳ ಮತ್ತು ಹೊರ ಆವರಣದಲ್ಲಿ ಸಮರ್ಪಕ ಬೆಳಕಿನ ವ್ಯವಸ್ಥೆ ಮಾಡಲಾಗಿದ್ದು, ವಿದ್ಯುತ್ ದೀಪಗಳಿಲ್ಲದೆ ರಾತ್ರಿ ವೇಳೆ ಸಾರ್ವಜನಿಕರಿಗೆ ಯಾವುದೇ ತೊಂದರೆಯಾಗಿರುವುದಿಲ್ಲ. |
| ಆ. | ಇದರಿಂದಾಗಿ ಹೊಸ ಬಸ್ ನಿಲ್ದಾಣದಲ್ಲಿ ರಾತ್ರಿ ವೇಳೆ ಕಳ್ಳಕಾಕರ ಹಾವಳಿ, ಅನೈತಿಕ ಚಟುವಟಿಕೆ ನಡೆಯುತ್ತಿದ್ದು, ಜನ ಸಾಮಾನ್ಯರಿಗೆ ಪ್ರಯಾಣಿಕರಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ಒದಗಿಸುವುದು) | ಹೊಸ ಬಸ್ ನಿಲ್ದಾಣದಲ್ಲಿ ರಾತ್ರಿ ವೇಳೆ ಕಳ್ಳಕಾಕರ ಹಾವಳಿ, ಅನೈತಿಕ ಚಟುವಟಿಕೆಗಳಿಂದಾಗಿ ಜನಸಾಮಾನ್ಯರಿಗೆ ಹಾಗೂ ಪ್ರಯಾಣಿಕರಿಗೆ ತೊಂದರೆ ಆಗಿರುವ ಬಗ್ಗೆ ವರದಿಯಾಗಿರುವುದಿಲ್ಲ. |
| ಇ. | ಕೂಡಲೇ ಹುಣಸೂರಿನ ನೂತನ ಬಸ್ ನಿಲ್ದಾಣದ ಸುತ್ತಲೂ ಪ್ರಖರ ವಿದ್ಯುತ್ ದೀಪಗಳ ವ್ಯವಸ್ಥೆ ಹಾಗೂ ಸೆಕ್ಯೂರಿಟಿ ಗಾರ್ಡ್ ವ್ಯವಸ್ಥೆ ಮಾಡುವ ಮೂಲಕ ಸಾರ್ವಜನಿಕರಿಗೆ ಮತ್ತು ಪ್ರಯಾಣಿಕರಿಗೆ ಅನುಕೂಲ ಕಲ್ಪಿಸಲು ಕ್ರಮ ಜರುಗಿಸಲಾಗುವುದೇ? | ಪ್ರಸ್ತುತ ಬಸ್ ನಿಲ್ದಾಣದ ಒಳ ಹಾಗೂ ಹೊರ ಆವರಣದಲ್ಲಿ ಸಮರ್ಪಕ ಬೆಳಕಿನ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ. ಇತ್ತೀಚೆಗೆ ಕೆಟ್ಟು ಹೋಗಿದ್ದ ಕೆಲವು ದೀಪಗಳ ಬಲ್ಬುಗಳನ್ನೂ ಸಹ ದುರಸ್ತಿ/ಬದಲಾಯಿಸಿ ಸರಿಪಡಿಸಲಾಗಿರುತ್ತದೆ.<br><br>ಪ್ರಸ್ತುತ ಭದ್ರತಾ ರಕ್ಷಕರ ಕೊರತೆಯಿರುವುದರಿಂದ, ಹುಣಸೂರು ನೂತನ ಬಸ್ ನಿಲ್ದಾಣಕ್ಕೆ ಗೃಹರಕ್ಷಕ ಸಿಬ್ಬಂದಿಗಳ ನಿಯೋಜನೆಗೆ ಕ್ರಮ ಕೈಗೊಳ್ಳಲಾಗಿದೆ. |

ಸಂಖ್ಯೆ: ಟಿಡಿ 46 ಟಿಸಿಕ್ಯೂ 2019

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿ ಹಾಗೂ
ಸಾರಿಗೆ ಸಚಿವರು